ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ




# ಸಮುದಾಯ ಶೌಚಾಲಯ ನಿರ್ಮಾಣದಲ್ಲಿ ಮಾದರಿಯಾದ ಉಡುಪಿ ಜಿಲ್ಲೆ

ಸ್ವಚ್ಛ ಗ್ರಾಮ ನಿರ್ಮಾಣ ಹಾದಿಯಲ್ಲಿ ತ್ಯಾಜ್ಯ ನಿರ್ವಹಣೆ, ಬೂದು ನೀರು ನಿರ್ವಹಣೆ, ಪ್ಲಾಸ್ಟಿಕ್ ನಿಷೇಧದ ಜೊತೆಗೆ ಶೌಚಾಲಯ ಬಳಕೆ ಕೂಡ ಪ್ರಮುಖ ಪಾತ್ರ ವಹಿಸುತ್ತದೆ. ಯಾವುದೇ ಗ್ರಾಮ ಅಥವಾ ಜಿಲ್ಲೆಯನ್ನು ಬಯಲು ಶೌಚ ಮುಕ್ತಗೊಳಿಸಲು ಕೇವಲ ವೈಯಕ್ತಿಕ ಶೌಚಾಲಯ ಹೊಂದಿದ್ದರೆ ಸಾಲದು, ಬದಲಿಗೆ ಪ್ರತಿ ಗ್ರಾಮದ ಸಾರ್ವಜನಿಕ ಸ್ಥಳಗಳಲ್ಲಿ ಸಮುದಾಯ ಶೌಚಾಲಯದ ವ್ಯವಸ್ಥೆಯಿರಬೇಕು.

ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯಡಿ ಪ್ರತಿಯೊಬ್ಬರೂ ತಮ್ಮ ಮನೆಗಳಲ್ಲಿ ಶೌಚಾಲಯ ನಿರ್ಮಿಸಿಕೊಂಡಿದ್ದಾರೆ. ಇದರ ಜೊತೆಗೆ ಜಿಲ್ಲೆಯ ವಿವಿಧ ಭಾಗಗಳಲ್ಲಿ ಈಗಾಗಲೇ ಸಮುದಾಯ ಶೌಚಾಲಯಗಳ ನಿರ್ಮಾಣಗೊಂಡು ಬಯಲು ಬಹಿರ್ದೆಸೆಗೆ ವಿದಾಯ ಹೇಳಲಾಗಿದೆ. ಈ ಮೂಲಕ ಸ್ವಚ್ಛ, ಸುಂದರ ಗ್ರಾಮಗಳನ್ನು ರೂಪಿಸುವಲ್ಲಿ (ಸ್ವಚ್ಛ ಭಾರತ್ ಮಿಷನ್ ಗ್ರಾಮೀಣ) ಪ್ರಮುಖ ಪಾತ್ರ ವಹಿಸಿದೆ. ಸಮುದಾಯ ಶೌಚಾಲಯ ನಿರ್ಮಾಣ, ಬಳಸುವಿಕೆ ಮತ್ತು ನಿರ್ವಹಣೆಯಲ್ಲಿ ವಿಶೇಷ ಸಾಧನೆ ಮಾಡುವ ಮೂಲಕ ಉಡುಪಿ ಜಿಲ್ಲೆ ಮಾದರಿಯಾಗಿದೆ.

## ಬಯಲು ಬಹಿರ್ದೆಸೆ ಮುಕ್ತ ಉಡುಪಿ ಜಿಲ್ಲೆ:

ಪಾರಂಪರಿಕ ಇತಿಹಾಸ ಹೊಂದಿರುವ ಉಡುಪಿ ಜಿಲ್ಲೆ ಸ್ವಚ್ಛತೆಯ ವಿಚಾರದಲ್ಲಿ ಕೂಡ ಸಾಕಷ್ಟು ಸಾಧನೆ ಮಾಡಿದೆ. ಉಡುಪಿ ಜಿಲ್ಲೆಯನ್ನು ಬಯಲು ಬಹಿರ್ದೆಸೆ ಮುಕ್ತ ಜಿಲ್ಲೆ ಎಂದು ಘೋಷಿಸಿರುವುದು ಮತ್ತೊಂದು ವಿಶೇಷ.

ಉಡುಪಿ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಬಹುತೇಕ ಗ್ರಾಮೀಣ ಕುಟುಂಬಗಳು ಈಗಾಗಲೇ ವೈಯಕ್ತಿಕ ಗೃಹ ಶೌಚಾಲಯವನ್ನು ಹೊಂದಿವೆ. ಎಲ್ಲರೂ ಶೌಚಾಲಯವನ್ನು ಹೊಂದುವಲ್ಲಿ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆ ಪ್ರಮುಖ ಪಾತ್ರ ವಹಿಸಿದೆ.

ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಸ್ಥಳದ ಅಭಾವವಿರುವ ಕುಟುಂಬಗಳಿಗೆ ಸಮುದಾಯ ಶೌಚಾಲಯವನ್ನು ನಿರ್ಮಿಸಿಕೊಡಲಾಗಿದೆ. ಹಾಗೆ ಹೆಚ್ಚು ಜನಸಂದಣಿ ಸೇರುವ ಸ್ಥಳ, ಸಂತೆ, ಮಾರುಕಟ್ಟೆ, ಬಸ್ ನಿಲ್ದಾಣ ಹಾಗೂ ಇತರ ಜನನಿಬಿಡ ಪ್ರದೇಶಗಳಲ್ಲಿ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ ಸಮುದಾಯ ಶೌಚಾಲಯಗಳನ್ನು ನಿರ್ಮಿಸಲಾಗಿದೆ.

ಉಡುಪಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಇದುವರೆಗೂ ಸುಮಾರು 41 ಸಮುದಾಯ ಶೌಚಾಲಯ ನಿರ್ಮಾಣ ಕಾರ್ಯ ಕೈಗೊಂಡಿದ್ದು 37 ಶೌಚಾಲಯಗಳ ಕಾಮಗಾರಿ ಪೂರ್ಣಗೊಂಡು, ಬಳಕೆಗೆ ಸಿದ್ಧವಾಗಿದೆ. ಇನ್ನೂ 4 ಸಮುದಾಯ ಶೌಚಾಲಯ ನಿರ್ಮಾಣ ಕಾಮಗಾರಿಗಳು ಮುಕ್ತಾಯದ ಹಂತದಲ್ಲಿವೆ.

ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ ಪ್ರತಿ ಶೌಚಾಲಯದ ನಿರ್ಮಾಣಕ್ಕೆ 3 ಲಕ್ಷ ರೂ ಅನುದಾನ ನೀಡಲಾಗುತ್ತದೆ.

## ಸಮುದಾಯ ಶೌಚಾಲಯ ನಿರ್ಮಾಣಕ್ಕೆ ಇರುವ ನಿಯಮಾವಳಿಗಳು:

- ಸಮುದಾಯ ಶೌಚಾಲಯ ನಿರ್ಮಾಣ ಮಾಡಲು ಸೂಕ್ತ ಜಾಗ ಲಭ್ಯವಿರಬೇಕು
- ಆಯ್ಕೆ ಮಾಡಿರುವ ಜಾಗ ಪಂಚಾಯಿತಿಯ ಹೆಸರಿನಲ್ಲಿರತಕ್ಕದ್ದು
- ಖಾಸಗಿ ಒಡೆತನದ ಜಾಗವಾಗಿದ್ದರೆ, ಮಾಲೀಕರ ಒಪ್ಪಿಗೆ ಪತ್ರ ಬೇಕಾಗುತ್ತದೆ
- ಶೌಚಾಲಯ ನಿರ್ವಹಣೆಗೆ ದೃಢೀಕರಣ ಪತ್ರವನ್ನು ಜಿಲ್ಲಾ ಪಂಚಾಯತ್ ನಿಂದ ಪಡೆಯುವುದು

ವೈಯಕ್ತಿಕ ಶೌಚಾಲಯ ನಿರ್ಮಾಣ ಮತ್ತು ಬಳಕೆಯ ಜೊತೆಗೆ ಸಮುದಾಯ ಶೌಚಾಲಯಗಳ ನಿರ್ಮಾಣ ಮತ್ತು ಬಳಕೆಯಿಂದ ಸಂಪೂರ್ಣ ಬಯಲು ಬಹಿರ್ದೆಸೆ ಮುಕ್ತ ಮಾಡಲು ಸಾಧ್ಯ. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಅಗತ್ಯವಿರುವೆಡೆಗಳಲ್ಲಿ ಸಮುದಾಯ ಶೌಚಾಲಯಗಳ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ. ಇದರಿಂದ ಹೆಚ್ಚು ಜನಸಂದಣಿ ಸೇರುವ ಈ ಜಾಗದಲ್ಲಿ ಶೌಚಾಲಯದ ಸಮಸ್ಯೆಗೆ ಸೂಕ್ತ ಪರಿಹಾರ ದೊರೆಯುವ ಜೊತೆಗೆ ಪರಿಸರದ ಸ್ವಚ್ಚತೆಯೂ ಸಾಧ್ಯವಾಗಲಿದೆ:



ಬಯಲು ಬಹಿರ್ದೆಸೆ ಈಗ ನಿಷಿದ್ಧ. ಎಲ್ಲರೂ ಪ್ರತಿ ದಿನ ಪ್ರತಿ ಬಾರಿ ಶೌಚಾಲಯ ಬಳಸಿ. ವೈಯಕ್ತಿಕ ಸ್ವಚ್ಛತೆ ಕಾಪಾಡಿಕೊಳ್ಳುವುದರ ಜೊತೆಗೆ ಪರಿಸರದ ಸ್ವಚ್ಛತೆ ಕಾಪಾಡಿ

ಸ್ವಚ್ಛ ಭಾರತ ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ

ಸ್ವಚ್ಛ ಸಂಕೀರ್ಣ

ಸ್ವಚ್ಛಮೇವ ಜಯತೇ SWACHHA MEVA JAYATE

ಜಲೋತ್ಸವ ಮನೆ ಮನೆಗೆ ಗಂಗೆ

ಮನೆ ಮನೆಗೆ ಗಂಗೆ ಜಲ ಜೀವನ್ ಮಿಷನ್